**ಕರ್ನಾಟಕ ಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.

ಸಂಖ್ಯೆ: ಪಪೂಶಿಇ/ಪರೀಕ್ಷೆ/ NSQF/ವೃಶಿ/2017-18. ದಿನಾಂಕ: .10.2017.

ಇವರಿಗೆ,

ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಮಾನ್ಯರೆ,

ವಿಷಯ: 2016-17ನೇ ಸಾಲಿನಲ್ಲಿ NSQF ಯೋಜನೆ ಅಡಿಯಲ್ಲಿ ವೃತ್ತಿಶಿಕ್ಷಣ ವಿಷಯಗಳನ್ನು ಆಯ್ಕೆ ಮಾಡಿಕೊಂಡ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಫಲಿತಾಂಶವನ್ನು Onlineನಲ್ಲಿ ದಾಖಲಿಸುವ ಬಗ್ಗೆ ಹಾಗೂ ಮಾರ್ಚ್ 2018ರಲ್ಲಿ NSQF ಯೋಜನೆ ಅಡಿಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರ ಜ್ಞಾಪನ ಸಂಖ್ಯೆ ಪಿಯು/ಶೈಶಾ-04/ NSQF/ಪ್ರಾಫ ಅನು/2017-18 ದಿನಾಂಕ: 26.05.2017.

* * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದಂತೆ 2016-17ನೇ ಸಾಲಿನಿಂದ ರಾಜ್ಯದ ಆಯ್ದ 100 ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ NSQF ಯೋಜನೆ ವೃತ್ತಿಶಿಕ್ಷಣ ಪಠ್ಯಕ್ರಮದಲ್ಲಿ ಮಾಹಿತಿ ತಂತ್ರಜ್ಞಾನ, ರಿಟೇಲ್, ಆಟೋಮೊಬೈಲ್, ಹೆಲ್ತ್‌ಕೇರ್ ಹಾಗೂ ಬ್ಯೂಟಿ ಮತ್ತು ವೆಲ್‌ನೆಸ್ ವಿಷಯಗಳನ್ನು ಅನುಷ್ಠಾನಗೊಳಿಸಲಾಗಿದೆ.

ಆಯ್ದ 100 ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪಟ್ಟಿಯನ್ನು ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ. ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು 2016-17ನೇ ಸಾಲಿನಲ್ಲಿ NSQF ಯೋಜನೆ ಅಡಿಯಲ್ಲಿ ವೃತ್ತಿಶಿಕ್ಷಣ ವಿಷಯಗಳನ್ನು ಆಯ್ಕೆ ಮಾಡಿಕೊಂಡ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಫಲಿತಾಂಶವನ್ನು Onlineನಲ್ಲಿ ದಾಖಲಿಸುವಂತೆ ಸೂಚಿಸಲು ತಿಳಿಸಿದೆ.

ಮಾರ್ಚ್ 2018ರಲ್ಲಿ NSQF ಯೋಜನೆ ಅಡಿಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಹಾಗೂ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಈ ಕೆಳಕಂಡ ಮಾಹಿತಿಗಳನ್ನು

1. ವಿದ್ಯಾರ್ಥಿಗಳ ಹೆಸರು, ವೃತ್ತಿಶಿಕ್ಷಣ ವಿಷಯ, ಮಾಧ್ಯಮ, ಪ್ರಥಮ ಪಿಯುಸಿ ಫಲಿತಾಂಶ.
2. NSQF ಯೋಜನೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹೆಸರು, ಬೋಧಿಸುತ್ತಿರುವ ವಿಷಯ, ವಿಳಾಸ, ಮೊಬೈಲ್ ಸಂಖ್ಯೆ.
3. 2018ರಲ್ಲಿ NSQF ಯೋಜನೆ ಅಡಿಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗುವ **ವಿದ್ಯಾರ್ಥಿಗಳಿಲ್ಲದಿದ್ದಲ್ಲಿ** ಶೂನ್ಯ ವರದಿಯನ್ನು

ಜಂಟಿನಿರ್ದೇಶಕರು (ಪರೀಕ್ಷೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ಸಂಬಂಧಪಟ್ಟ ಉಪನಿರ್ದೇಶಕರ ಕಛೇರಿಗೆ ತುರ್ತಾಗಿ ಸಲ್ಲಿಸುವಂತೆ ಕ್ರಮಕೈಗೊಳ್ಳಲು ಸೂಚಿಸಿದೆ.

27/10

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಯನ್ನು:**

1. ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ.
2. ಇ ಆಡಳಿತ ಅಂತರ್ಜಾಲದಲ್ಲಿ ಪ್ರಕಟಿಸಲು.
3. ಕಛೇರಿ ಪ್ರತಿ.